ಜನಮನದ ಸಾರಥಿ
ವಾರ್ತಾ ಭಾರತಿ

# ನ.27ರಿಂದ 2 ದಿನಗಳ ಸಾಹಿತ್ಯ ಚಿತ್ರೋತ್ಸವ

## 6 ಸಾಕ್ಷ್ಯ ಚಿತ್ರಗಳ ಪ್ರದರ್ಶನ

ಬೆಂಗಳೂರು, ನ.23: ಕೇಂದ್ರ ಸಾಹಿತ್ಯ ಅಕಾಡಮಿ ವತಿಯಿಂದ 'ಸಾಹಿತ್ಯ ಚಿತ್ರೋತ್ಸವ: 6 ಸಾಕ್ಷ್ಯ ಚಿತ್ರಗಳ ಪ್ರದರ್ಶನ' ಕಾರ್ಯಕ್ರಮವನ್ನು ನ.27ರಿಂದ ಎರಡು ದಿನಗಳವರೆಗೆ ನಗರದ ರೇಸ್‌ಕೋರ್ಸ್ ರಸ್ತೆಯಲ್ಲಿರುವ ಭಾರತೀಯ ವಿದ್ಯಾಭವನದ ಕೆ.ಆರ್.ಜಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಾಹಿತ್ಯ ಅಕಾಡಮಿಯ ಅಧ್ಯಕ್ಷ ಚಂದ್ರಶೇಖರ ಕಂಬಾರ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದು, ಚಲನಚಿತ್ರ ನಿರ್ದೇಶಕ ಪಿ.ಶೇಷಾದ್ರಿ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ಪ್ರಕಟನೆ ತಿಳಿಸಿದೆ. ನ.27ರ ಶನಿವಾರ ಪು.ತಿ.ನರಸಿಂಹಾಚಾರ್, ಡಾ.ಜಿ.ಎಸ್. ಶಿವರುದ್ರಪ್ಪ, ಎಸ್.ಎಲ್.ಭೈರಪ್ಪರ ಕುರಿತ ಸಾಕ್ಷ್ಯಚಿತ್ರಗಳು ಪ್ರದರ್ಶನವಾಗಲಿದೆ. ನ.28ರಂದು ರವಿವಾರ ಯು.ಆರ್. ಅನಂತಮೂರ್ತಿ, ಗಿರೀಶ್ ಕಾರ್ನಾಡ್, ಚಂದ್ರಶೇಖರ ಕಂಬಾರರ ಜೀವನ ಕುರಿತ ಸಾಕ್ಷ್ಯಚಿತ್ರಗಳು ಪ್ರದರ್ಶನವಾಗಲಿವೆ. ಕಾರ್ಯಕ್ರಮದ 2 ದಿನ ಕೇಂದ್ರ ಸಾಹಿತ್ಯ ಅಕಾಡಮಿಯ ಪುಸ್ತಕಗಳು ಮತ್ತು ಡಿ.ವಿ.ಡಿ.ಗಳು ಮಾರಾಟಕ್ಕೆ ಲಭ್ಯವಿರುತ್ತವೆ ಎಂದು ಪ್ರಕಟನೆ ತಿಳಿಸಿದೆ.

Bengaluru Edition
Nov 24, 2021 Page No.2